# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 04-03-2021 ಪ್ರಶ್ನೆ ಸಂಖ್ಯೆ : 545 (690)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 04-03-2021

ಉತ್ತರಿಸುವ ಸಚಿವರು: ಮಾನ್ಯ ಜಲ ಸಂಪನ್ಮೂಲ ಸಚಿವರು

ವಿಷಯ : ವಾರಾಹಿ ಬಲದಂಡೆ ಕಾಲುವೆ ಯೋಜನೆಯ ಅನುಷ್ಠಾನದಲ್ಲಿ ಆಗುತ್ತಿರುವ ವಿಳಂಬ ಕುರಿತು

(ಅ) ರಾಜ್ಯದಲ್ಲಿ ಪ್ರಗತಿಯಲ್ಲಿರುವ ನೀರಾವರಿ ಯೋಜನೆಗಳು ಯಾವುವು; ಕಳೆದ ಮೂರು ವರ್ಷಗಳಲ್ಲಿ ಈ ಯೋಜನೆಗಳಿಗೆ ಬಿಡುಗಡೆಯಾದ ಅನುದಾನವೆಷ್ಟು; (ವರ್ಷವಾರು, ಯೋಜನಾವಾರು ಮಾಹಿತಿಯನ್ನು ನೀಡುವುದು)

(ಆ) 41 ವರ್ಷಗಳ ಹಿಂದೆ ಪ್ರಾರಂಭಗೊಂಡ ವಾರಾಹಿ ನೀರಾವರಿ ಯೋಜನೆಯ ಬಲದಂಡೆ ಕಾಲುವೆ ಮತ್ತು ಉಪಕಾಲುವೆಯು ಹಾದು ಹೋಗುವ ಗ್ರಾಮಗಳು ಯಾವುವು ; ಅವುಗಳ ಒಟ್ಟು ಅಚ್ಚುಕಟ್ಟು ಪ್ರದೇಶದ ವಿಸ್ತೀರ್ಣವೆಷ್ಟು; ಅವುಗಳಲ್ಲಿ ಈಗ ನೀರಾವರಿ ಸೌಲಭ್ಯವನ್ನು ಪಡೆಯುತ್ತಿರುವ ಅಚ್ಚು ಕಟ್ಟು ಪ್ರದೇಶದ ವಿಸ್ತೀರ್ಣವೆಷ್ಟು; ಬಾಕಿಯಿರುವ ಅಚ್ಚುಕಟ್ಟು ಪ್ರದೇಶದ ವಿಸ್ತೀರ್ಣವೆಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಇ) ವಾರಾಹಿ ನೀರಾವರಿ ಬಲದಂಡೆ ಕಾಲುವೆಯನ್ನು ಪೂರ್ಣ ಅನುಷ್ಠಾನಗೊಳಿಸಲು ಅಗತ್ಯವಾದ ಅನುದಾನವೆಷ್ಟು; ಬಿಡುಗಡೆಯಾದ ಅನುದಾನವೆಷ್ಟು; ಬಿಡುಗಡೆಗೆ ಬಾಕಿಯಿರುವ ಅನುದಾನವೆಷ್ಟು; ಯೋಜನೆಯನ್ನು ಪೂರ್ಣಗೊಳಿಸಲು ಇಲಾಖೆಯ ಕಾಲಮಿತಿ ಯಾವುದು?